936 ಶ್ರೀ ಖಾದರ್ ಯು.ಟಿ. ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಸಹಕಾರ ಸಂಘಗಳಿಂದ ಬಡ ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲವನ್ನು ನೀಡುವ ಉದ್ದೇಶ ಸರ್ಕಾರದಲ್ಲಿ ಇದೆಯೇ;

ಆ) ಹಾಗಿದ್ದಲ್ಲಿ ಇದರ ಪ್ರಯೋಜನ ದೊರಕಬಹುದಾದ ರೈತರೆಷ್ಟು ಹಾಗೂ ಪ್ರಮಾಣವೆಷ್ಟು; (ವಿವರ ನೀಡುವುದು)

ಇ) ಯಾವ ಸಂಘ ಸಂಸ್ಥೆಗಳ ಮೂಲಕ ವಿತರಿಸಲಾಗುವುದು?

ಶ್ರೀ ಲಕ್ಷ್ಮಣ ಸ. ಸವದಿ (ಸಹಕಾರ ಸಚಿವರು)

ಅ) ಹೌದು. ದಿನಾಂಕ 1–4–2008ರಿಂದ ಸಹಕಾರಿ ಸಂಸ್ಥೆಗಳ ಮೂಲಕ ರೈತರಿಗೆ ಶೇ. 3ರ ಬಡ್ಡಿ ದರದಲ್ಲಿ ಕೃಷಿ ಸಾಲ ನೀಡುವ ಯೋಜನೆಯು ಜಾರಿಯಲ್ಲಿರುತ್ತದೆ.

ಆ) 2008–09ನೇ ಸಾಲಿನಲ್ಲಿ 13,19,344 ರೈತರಿಗೆ ರೂ. 3,576.98 ಕೋಟಿಗಳ ಕೃಷಿ ಸಾಲ ನೀಡಲಾಗಿದೆ. 2009–10ನೇ ಸಾಲಿನಲ್ಲಿ ಜೂನ್ ಅಂತ್ಯದವರೆಗೆ 3,08,762 ರೈತರಿಗೆ ರೂ. 1,162,60 ಕೋಟಿಗಳ ಸಾಲ ನೀಡಲಾಗಿದೆ.

ಇ) ಈ ಸಾಲಗಳನ್ನು ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳು ಅಂದರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳ ಮೂಲಕ ವಿತರಿಸಲಾಗುವುದು.

937 ಶ್ರೀ ಖಾದರ್ ಯು.ಟಿ. ಮಾನ್ಯ ತೋಟಗಾರಿಕೆ ಹಾಗೂ ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಕಾರಾಗೃಹಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಯಾವ ಯಾವ ಕಾರಾಗೃಹಗಳಲ್ಲಿ ಇಂತಹ ಪ್ರಕರಣಗಳು ನಡೆದಿವೆ; (ವಿವರ ನೀಡುವುದು);

ಇ) ಹಾಗಿದ್ದಲ್ಲಿ, ಇಂತಹ ಪ್ರಕರಣಗಳನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು)

ಅ) ಹೌದು.

ಆ) ಕೇಂದ್ರ ಕಾರಾಗೃಹ ಬೆಂಗಳೂರು, ಮೈಸೂರು, ಬಳ್ಳಾರಿ, ಬೆಳಗಾಂ, ಗುಲ್ಬರ್ಗಾ ಹಾಗೂ ಜಿಲ್ಲಾ ಕಾರಾಗೃಹ ಮಂಗಳೂರು, ತುಮಕೂರು ಮತ್ತು ರಾಮನಗರದಲ್ಲಿ ಇಂತಹ ಕಾನೂನು ಬಾಹಿರ ಚಟುವಟಿಕೆಗಳು ನಡೆದಿರುತ್ತವೆ. ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಬಂದಿಗಳ ಅಧಿಕೃತ ಸಾಮರ್ಥ್ಯ 2100 ಇದ್ದು, ದಿನಾಂಕ 30-6-2009ಕ್ಕೆ 4904 ಬಂದಿಗಳನ್ನು ಬಂಧಿಸಿಡಲಾಗಿದೆ. ಅಧಿಕೃತ ಸಾಮರ್ಥ್ಯಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಬಂದಿಗಳು ದಾಖಲಾಗಿರುವುದ ರಿಂದ ಹಾಗೂ ಈ ಇಲಾಖೆಯಲ್ಲಿ ಅಧಿಕೃತ ಸಾಮರ್ಥ್ಯಕ್ಕಿಂತ ಜಾಸ್ತಿಯಿರುವ ಬಂದಿಗಳಿಗನುಗುಣವಾಗಿ ಕಾವಲು ಸಿಬ್ಬಂದಿಗಳ ತೀವ್ರ ಕೊರತೆಯಿರುವುದರಿಂದ ಈ ರೀತಿಯ ಸಮಸ್ಯೆಗಳು ಉದ್ಭವಾಗಿರುತ್ತವೆ.

ಇ) ಕಾರಾಗೃಹಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟಲು ಮುಖ್ಯದ್ವಾರದಲ್ಲಿ Handheld Metal Detector, Deep Search Metal Detector ಹಾಗೂ Door-Frame Metal Detectorಗಳನ್ನು ಅಳವಡಿಸಲಾಗಿದೆ. ಅಲ್ಲದೆ ಹಾಲಿ ಇರುವ ಕಾವಲು ಸಿಬ್ಬಂದಿಗಳಿಂದ ಮುಖ್ಯ ದ್ವಾರಕ್ಕೆ ಬಂದು ಹೋಗುವ ಹಾಗೂ ಬಂದಿಗಳ ಸಂದರ್ಶನಕ್ಕೆ ಬಂದು ಹೋಗುವ ಪ್ರತಿಯೊಬ್ಬ ವ್ಯಕ್ತಿಯನ್ನು ತಪಾಸಣೆ ಮಾಡಲು ಕ್ರಮ ಜರುಗಿಸಲಾಗಿದೆ. ಹಾಗೂ ಬಂದಿಗಳ ಬ್ಯಾರಕ್‌ಗಳಲ್ಲಿ ಅನಿರೀಕ್ಷಿತ ತಪಾಸಣೆಗಳನ್ನು ನಡೆಸಿ ಬ್ಯಾರಕ್‌ಗಳಲ್ಲಿ ಕಂಡು ಬರುವ ನಿಷೇಧ ವಸ್ತುಗಳನ್ನು ವಶಪಡಿಸಿಕೊಂಡು ನಿಷ್ಕ್ರೀಯೆಗೊಳಿಸಲಾಗುತ್ತಿದೆ. ಅಲ್ಲದೆ, ಕಾರಾಗೃಹಗಳ ಅಧೀಕ್ಷಕರಿಗೆ ಮೇಲಿಂದ ಮೇಲೆ ಸುತ್ತೋಲೆಗಳನ್ನು ಕಳುಹಿಸಿ ಕಾರಾಗೃಹಗಳ ಶಿಸ್ತು, ಬಿಗಿ ಭದ್ರತೆ ಹಾಗೂ ಸುರಕ್ಷತೆಯ ಬಗ್ಗೆ ಎಚ್ಚರ ವಹಿಸಲು ಸೂಚನೆಗಳನ್ನು ಸಹ ನೀಡಲಾಗುತ್ತಿದೆ. ಹಾಗೂ 342 ವೀಕ್ಷಕರು ಮತ್ತು 22 ಜೈಲರ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗಿದ್ದು, ತ್ವರಿತವಾಗಿ ಕ್ರಮ ಕೈಗೊಳ್ಳಲಾಗಿದೆ.

1013 ಶ್ರೀ ಮಂಜು ಎ. ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಿನಿಸ್ಟ್ರಿ ಆಫ್ ಕಮ್ಯುನಿಕೇಶನ್ ಗೃಹ ನಿರ್ಮಾಣ ಸಹಕಾರ ಸಂಘದ ಆರನೇ ಹಂತದ ಬಡಾವಣೆಯಲ್ಲಿ ನಿವೇಶನ ನೀಡಬೇಕಾಗಿರುವ ಸದಸ್ಯರ ಸಂಖ್ಯೆ ಎಷ್ಟು;

ಆ) ಸದಸ್ಯರು ನಿವೇಶನಕ್ಕಾಗಿ ಠೇವಣಿ ಹೂಡಿರುವ ಹಣವೆಷ್ಟು;